**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.1300/2021**

ಪಿ.ಡಬ್ಲ್ಯೂಃ 5

ಸಿ.ಡಬ್ಲ್ಯೂಃ 5

ಸಾಕ್ಷಿದಾರರ ಹೆಸರು ಃ ನಾಗರಾಜ

ತಂದೆ ಹೆಸರು ಃ ಹನುಮಂತಪ್ಪ

ವಯಸ್ಸು ಃ 40 ವರ್ಷ

ಉದ್ಯೋಗ ಃ ಗಾರೆ ಕೆಲಸ

**ವಾಸಸ್ಥಳ** ಃ ಲಕ್ಕವಳ್ಳಿ

**ದಿನಾಂಕಃ 15-06-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ ಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ಆರು ತಿಂಗಳ ಹಿಂದೆ ಸಂಜೆ 5-30 ಗಂಟೆ ಸಮಯದಲ್ಲಿ ಲಕ್ಕವಳ್ಳಿಯಲ್ಲಿ ಗಲಾಟೆಯ ವಿಚಾರವಾಗಿ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-3 ಮತ್ತು 4 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**( ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕಃ **30-12-2018** ರಂದು ಚಾಸಾ-1 ರವರ ಮನೆಯಲ್ಲಿ ವರದಕ್ಷಿಣೆಯ ಕಿರುಕುಳದ ವಿಚಾರವಾಗಿ ಆರೋಪಿತರು ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಹಲ್ಲೆ ಮಾಡಿದ ವಿಚಾರವಾಗಿ ಪೊಲೀಸರು ಬಂದು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನೀವು ಸಹಿ

ಮಾಡಿರುತ್ತಿರಾ ಎಂದರೆ ಸಾಕ್ಷಿ. ಸಹಿ ಮಾಡಿರುತ್ತೇನೆ, ಆದರೆ ವಿಚಾರ ತಿಳಿದಿರುವುದಿಲ್ಲ ಎಂದು ನುಡಿದಿರುತ್ತಾರೆ. ಆ ಸಮಯದಲ್ಲಿ ಮೂರುವರೆ ಅಡಿ ಉದ್ದದ ಒಂದು ಕಾಡುಜಾತಿಯ ದೊಣ್ಣೆಯನ್ನು ಪೊಲೀಸರು ನಿಮ್ಮ ಸಮಕ್ಷಮದಲ್ಲಿ ವಶಪಡಿಸಿಕೊಂಡಿರುತ್ತಾರೆಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.**

ಪಾಟೀ ಸವಾಲು ಇರುವುದಿಲ್ಲ

**ಮರುವಿಚಾರಣೆ:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**